# All India Radio: Bangalore
# National Bulletin In Kannada
# 25.09.2025 07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

- ಉತ್ತರ ಪ್ರದೇಶ, ರಾಜಸ್ಥಾನಕ್ಕೆ ಇಂದು ಪ್ರಧಾನಿ ನರೇಂದ್ರ ಮೋದಿ ಭೇಟಿ ; ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ
- ಸುಮಾರು ೯೫ ಸಾವಿರ ಕೋಟಿ ರೂಪಾಯಿಗಳ ಆರು ಪ್ರಸ್ತಾವನೆಗಳಿಗೆ ಕೇಂದ್ರ ಸಚಿವ ಸಂಪುಟ ಅನುಮೋದನೆ
- ಕನ್ನಡ ಸಾರಸತ್ವ ಲೋಕದ ಮೇರು ಪರ್ವತ ಡಾ. ಎಸ್.ಎಲ್.ಭೈರಪ್ಪ ಅಸ್ತಂಗತ ; ಗಣ್ಯರ ಕಂಬನಿ
- ಏಷ್ಯಾ ಕಪ್ ಟಿ-೨೦ ಕ್ರಿಕೆಟ್‌ಂ: ಸೂಪರ್-೪ ಹಂತದ ಪಂದ್ಯದಲ್ಲಿ ಬಾಂಗ್ಲಾದೇಶ ವಿರುದ್ಧ ಭಾರತಕ್ಕೆ ೪೧ ರನ್‌ಗಳ ಭರ್ಜರಿ ಜಯ

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಉತ್ತರ ಪ್ರದೇಶ ಮತ್ತು ರಾಜಸ್ಥಾನಕ್ಕೆ ಭೇಟಿ ನೀಡಲಿದ್ದಾರೆ. ಅವರು ಗ್ರೇಟರ್ ನೋಯ್ಡಾದಲ್ಲಿ ಉತ್ತರ ಪ್ರದೇಶ ಅಂತಾರಾಷ್ಟ್ರೀಯ ವ್ಯಾಪಾರ ಪ್ರದರ್ಶನ -೨೦೨೫ ಅನ್ನು ಉದ್ಘಾಟಿಸಲಿದ್ದಾರೆ. ವ್ಯಾಪಾರ ಪ್ರದರ್ಶನ ಇದೇ ೨೯ ರವರೆಗೆ ನಡೆಯಲಿದೆ. ಇದು ರಾಜ್ಯದ ವೈವಿಧ್ಯಮಯ ಕರಕುಶಲ ಸಂಪ್ರದಾಯ, ಆಧುನಿಕ ಕೈಗಾರಿಕೆ, ಬಲಿಷ್ಠ ಎಂಎಸ್‌ಎಂಇ ಗಳು ಮತ್ತು ಉದಯೋನ್ಮುಖ ಉದ್ಯಮಿಗಳನ್ನು ಒಂದೇ ವೇದಿಕೆಯಡಿ ತರುತ್ತದೆ. ಕರಕುಶಲ ವಸ್ತುಗಳು, ಜವಳಿ, ಚರ್ಮ, ಕೃಷಿ, ಆಹಾರ ಸಂಸ್ಕರಣೆ, ಮಾಹಿತಿ ತಂತ್ರಜ್ಞಾನ, ಎಲೆಕ್ಟ್ರಾನಿಕ್ಸ್, ಆಯುಷ್ ಸೇರಿದಂತೆ ಪ್ರಮುಖ ಕ್ಷೇತ್ರಗಳನ್ನು ಪ್ರತಿನಿಧಿಸುತ್ತದೆ. ಇದು ಉತ್ತರ ಪ್ರದೇಶದ ಶ್ರೀಮಂತ ಕಲೆ, ಸಂಸ್ಕೃತಿ ಮತ್ತು ಪಾಕ ಪದ್ಧತಿಯನ್ನು ಒಂದೇ ಸೂರಿನಡಿ ಪ್ರದರ್ಶಿಸುತ್ತದೆ. ನಂತರ, ಪ್ರಧಾನಿ ರಾಜಸ್ಥಾನಕ್ಕೆ ಭೇಟಿ ನೀಡಲಿದ್ದು, ಒಂದು ಲಕ್ಷ ೨೨ ಸಾವಿರ ೧೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ.

ಬನ್ಸ್ವಾರಾದಲ್ಲಿ ಸಾರ್ವಜನಿಕ ಸಮಾರಂಭವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಅಲ್ಲದೇ ಪ್ರಧಾನ ಮಂತ್ರಿ ಕುಸುಮ್ ಫಲಾನುಭವಿಗಳೊಂದಿಗೆ ಸಂವಹನ ನಡೆಸಲಿದ್ದಾರೆ. ಇದೇ ವೇಳೆ ಸುಮಾರು ೪೨ ಸಾವಿರ ಕೋಟಿ ರೂಪಾಯಿಗಳ ಅನುಶಕ್ತಿ ವಿದ್ಯುತ್ ನಿಗಮ್ ಲಿಮಿಟೆಡ್‌ನ ಮಹಿ ಬನ್ಸ್‌ವಾರಾ ರಾಜಸ್ಥಾನ ಪರಮಾಣು ವಿದ್ಯುತ್ ಯೋಜನೆಗೆ ಪ್ರಧಾನಿ ಮೋದಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಸುಮಾರು ೧೯ ಸಾವಿರದ ೨೧೦ ಕೋಟಿ ರೂಪಾಯಿಗಳ ಹಸಿರು ಇಂಧನ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ. ಫಲೋಡಿ, ಜೈಸಲ್ಮೇರ್, ಜಲೋರ್ ಮತ್ತು ಸಿಕಾರ್ ಸೇರಿದಂತೆ ಇತರೆ ಸ್ಥಳಗಳಲ್ಲಿ ಸೌರ ಯೋಜನೆಗಳನ್ನು ಪ್ರಧಾನಿ ಉದ್ಘಾಟಿಸಲಿದ್ದಾರೆ.

<><><>

ನವದೆಹಲಿಯ ಭಾರತ್ ಮಂಟಪಂನಲ್ಲಿ ಇಂದು ಸಂಜೆ ನಾಲ್ಕು ದಿನಗಳ ವರ್ಲ್ಡ್ ಫುಡ್ ಇಂಡಿಯಾವನ್ನು ಪ್ರಧಾನಿ ನರೇಂದ್ರ ಮೋದಿ ಉದ್ಘಾಟಿಸಲಿದ್ದಾರೆ. ವರ್ಲ್ಡ್ ಫುಡ್ ಇಂಡಿಯಾದ ೪ನೇ ಆವೃತ್ತಿಯು ವೈವಿಧ್ಯಮಯ ಆಹಾರ ಸಂಸ್ಕರಣಾ ಕ್ಷೇತ್ರದಲ್ಲಿ ಹೂಡಿಕೆಗಳನ್ನು ಉತ್ತೇಜಿಸುವ ಜೊತೆಗೆ ಭಾರತದ ಶ್ರೀಮಂತ ಆಹಾರ ಸಂಸ್ಕೃತಿಯನ್ನು ಜಗತ್ತಿಗೆ ಪರಿಚಯಿಸುವ ಗುರಿಯನ್ನು ಹೊಂದಿದೆ.

<><><>

ಸುಮಾರು ೯೫ ಸಾವಿರ ಕೋಟಿ ರೂಪಾಯಿಗಳ ಆರು ಪ್ರಸ್ತಾವನೆಗಳನ್ನು ಕೇಂದ್ರ ಸಚಿವ ಸಂಪುಟ ಅನುಮೋದಿಸಿದೆ. ಭಾರತದ ಹಡಗು ನಿರ್ಮಾಣ ಮತ್ತು ಕಡಲ ಪರಿಸರ ವ್ಯವಸ್ಥೆಯನ್ನು ಪುನರುಜ್ಜೀವನಗೊಳಿಸಲು ೬೯ ಸಾವಿರ ೭೨೫ ಕೋಟಿ ರೂಪಾಯಿಗಳ ಸಮಗ್ರ ಪ್ಯಾಕೇಜ್‌ಗೆ ಸಂಪುಟ ಅನುಮೋದನೆ ನೀಡಿದೆ. ಈ ಕುರಿತು ನವದೆಹಲಿಯಲ್ಲಿ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಸಚಿವ ಅಶ್ವಿನಿ ವೈಷ್ಣವ್, ದೇಶೀಯ ಸಾಮರ್ಥ್ಯವನ್ನು ಬಲಪಡಿಸಲು, ದೀರ್ಘಕಾಲೀನ ಹಣಕಾಸು ಸುಧಾರಿಸಲು ಹಾಗೂ ಗ್ರೀನ್‌ಫೀಲ್ಡ್ ಮತ್ತು ಬ್ರೌನ್‌ಫೀಲ್ಡ್ ಶಿಪ್‌ಯಾರ್ಡ್ ಅಭಿವೃದ್ಧಿಯನ್ನು ಉತ್ತೇಜಿಸಲು ವಿನ್ಯಾಸಗೊಳಿಸಲಾದ ವಿಧಾನವನ್ನು ಈ ಪ್ಯಾಕೇಜ್ ಪರಿಚಯಿಸುತ್ತದೆ ಎಂದು ಹೇಳಿದ್ದಾರೆ. ಎಲ್ಲಾ ಉಪಕ್ರಮಗಳ ಅನುಷ್ಠಾನದ ಮೇಲ್ವಿಚಾರಣೆ ಮಾಡಲು ರಾಷ್ಟ್ರೀಯ ಹಡಗು ನಿರ್ಮಾಣ ಮಿಷನ್ ಸಹ ಸ್ಥಾಪಿಸಲಾಗುವುದು ಎಂದು ಅವರು ತಿಳಿಸಿದ್ದಾರೆ. ೧೦ ಲಕ್ಷ ೯೧ ಸಾವಿರ ರೈಲ್ವೆ ಉದ್ಯೋಗಿಗಳಿಗೆ ೭೮ ದಿನಗಳ ಉತ್ಪಾದಕತೆ ಸಂಬಂಧಿತ ಬೋನಸ್-ಪಿಎಲ್‌ಬಿ ಪಾವತಿಸಲು ಕೇಂದ್ರ ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ಮಾಹಿತಿ ನೀಡಿದ್ದಾರೆ.

ಅರ್ಹ ರೈಲ್ವೆ ಉದ್ಯೋಗಿಗೆ ಪಿಎಲ್‌ಬಿ ಪಾವತಿಯನ್ನು ಪ್ರತಿ ವರ್ಷ ದುರ್ಗಾ ಪೂಜೆ ಮತ್ತು ದಸರಾ ರಜಾ ದಿನಗಳ ಮೊದಲು ಮಾಡಲಾಗುತ್ತದೆ. ರೈಲ್ವೆ ನೌಕರರು ರೈಲ್ವೆಯ ಕಾರ್ಯಕ್ಷಮತೆಯನ್ನು ಸುಧಾರಿಸಲು ಶ್ರಮಿಸುವಂತೆ ಪ್ರೇರೇಪಿಸಲು ಪಿಎಲ್‌ಬಿ ಪಾವತಿಯು ಪ್ರೋತ್ಸಾಹಕವಾಗಿ ಕಾರ್ಯನಿರ್ವಹಿಸುತ್ತದೆ ಎಂದು ಅವರು ವಿವರಿಸಿದ್ದಾರೆ. ಒಟ್ಟು ಎರಡು ಸಾವಿರದ ೨೭೭ ಕೋಟಿ ರೂಪಾಯಿಗಳ ವೆಚ್ಚದೊಂದಿಗೆ ಸಾಮರ್ಥ್ಯ ವೃದ್ಧಿ ಮತ್ತು ಮಾನವ ಸಂಪನ್ಮೂಲ ಅಭಿವೃದ್ಧಿಗಾಗಿ ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಇಲಾಖೆ, ವೈಜ್ಞಾನಿಕ ಮತ್ತು ಕೈಗಾರಿಕಾ ಸಂಶೋಧನಾ ಮಂಡಳಿ ಡಿಎಸ್‌ಐಆರ್, ಸಿಎಸ್‌ಐಆರ್ ಯೋಜನೆಯನ್ನು ಸಂಪುಟ ಅನುಮೋದಿಸಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಆರ್ಥಿಕ ವ್ಯವಹಾರಗಳ ಕುರಿತಾದ ಸಂಪುಟ ಸಮಿತಿ ಇಂದು ಬಿಹಾರದ ಭಕ್ತಿಯಾರ್ಪುರ್-ರಾಜ್‌ಗೀರ್-ತಿಲೈಯಾ ರೈಲು ಮಾರ್ಗದ ವಿಭಾಗವನ್ನು ೨ ಸಾವಿರದ ೧೯೨ ಕೋಟಿ ರೂಪಾಯಿಗಳ ವೆಚ್ಚದಲ್ಲಿ ದ್ವಿಪಥಗೊಳಿಸಲು ಅನುಮೋದನೆ ನೀಡಿದೆ ಎಂದು ರೈಲ್ವೆ ಸಚಿವರು ಮಾಹಿತಿ ನೀಡಿದ್ದಾರೆ.

<><><><>

ಪದ್ಮಭೂಷಣ, ಸರಸ್ವತಿ ಸಮ್ಮಾನ್ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಡಾ. ಎಸ್.ಎಲ್.ಭೈರಪ್ಪ ಅವರು ಬೆಂಗಳೂರಿನಲ್ಲಿ ನಿನ್ನೆ ನಿಧನರಾಗಿದ್ದಾರೆ. ೯೪ ವರ್ಷದ ಎಸ್.ಎಲ್.ಭೈರಪ್ಪನವರು ಪ್ರಸಿದ್ಧ ಕನ್ನಡ ಕಾದಂಬರಿಕಾರ, ತತ್ವಜ್ಞಾನಿ ಮತ್ತು ಅನುಭವಿ ಲೇಖಕರಾಗಿದ್ದು, ೨೦೧೬ರಲ್ಲಿ ಪದ್ಮಶ್ರೀ, ೨೦೨೩ರಲ್ಲಿ ಪದ್ಮಭೂಷಣ ಪ್ರಶಸ್ತಿಗೆ ಭಾಜನರಾಗಿದ್ದರು. ೨೦೧೦ರಲ್ಲಿ ಅವರಿಗೆ ಸರಸ್ವತಿ ಸಮ್ಮಾನ್ ಪ್ರಶಸ್ತಿ ಒಲಿದು ಬಂದಿತ್ತು.

ಭೈರಪ್ಪ ಅವರು ಪರ್ವ, ಆವರಣ, ಗೃಹಭಂಗ, ಮತದಾನ, ವಂಶವೃಕ್ಷ, ನಾಯಿನೆರಳು, ದಾಟು, ಉತ್ತರಕಾಂಡ, ಯಾನ, ಕವಲು, ಸಾಕ್ಷಿ ಸೇರಿದಂತೆ ಅನೇಕ ಕಾದಂಬರಿಗಳನ್ನು ಬರೆದಿದ್ದಾರೆ. ವಂಶವೃಕ್ಷ ಕಾದಂಬರಿಗೆ ೧೯೬೬ರಲ್ಲಿ ರಾಜ್ಯ ಸಾಹಿತ್ಯ ಅಕಾಡೆಮಿ, ದಾಟು ಕಾದಂಬರಿಗೆ ೧೯೭೫ರಲ್ಲಿ ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ದೊರೆತಿದೆ. ಭೈರಪ್ಪ ಅವರ ಕಾದಂಬರಿಗಳು ಇಂಗ್ಲೀಷ್ ಸೇರಿದಂತೆ ದೇಶ-ವಿದೇಶಗಳ ಭಾಷೆಗಳಿಗೆ ಅನುವಾದಗೊಂಡಿವೆ. ಹಾಸನ ಜಿಲ್ಲೆಯ ಸಂತೇಶಿವಾರ ಗ್ರಾಮದವರಾದ ಇವರು, ತಮ್ಮ ಸ್ವಗ್ರಾಮ ಮತ್ತು ಸುತ್ತಮುತ್ತಲಿನ ಕೆರೆಗಳಿಗೆ ನೀರು ತುಂಬಿಸಲು ಶ್ರಮಿಸಿದ್ದರು.

ಎಸ್.ಎಲ್.ಭೈರಪ್ಪ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಅನೇಕ ಸಾಹಿತಿಗಳು, ಗಣ್ಯರು ಸಂತಾಪ ಸೂಚಿಸಿದ್ದಾರೆ. ಎಸ್.ಎಲ್.ಭೈರಪ್ಪ ಅವರ ಬದುಕು ಮತ್ತು ಬರಹ ಕುರಿತು ಹಿರಿಯ ಸಾಹಿತಿ ಡಾ. ನಾ. ಸೋಮೇಶ್ವರ ಅವರು ತಮ್ಮ ಅನಿಸಿಕೆ ಹಂಚಿಕೊಂಡಿದ್ದು, ಅವರ ನಿಧನಕ್ಕೆ ಕಂಬನಿ ಮಿಡಿದಿದ್ದಾರೆ. ಸಾಹಿತ್ಯ ಲೋಕಕ್ಕೆ ಡಾ. ಎಸ್.ಎಲ್.ಭೈರಪ್ಪನವರ ಕೊಡುಗೆ ಕುರಿತು ಹಿರಿಯ ಲೇಖಕಿ ಬಿ.ಯು.ಗೀತಾ ತಮ್ಮ ಅನಿಸಿಕೆ ಹಂಚಿಕೊಂಡಿದ್ದು, ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ.

ಧ್ವನಿ: ಲೇಖಕಿ ಬಿ.ಯು.ಗೀತಾ

ಇಂದು ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಪಾರ್ಥೀವ ಶರೀರದ ಅಂತಿಮ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ. ನಾಳೆ ಮೈಸೂರಿನ ಚಾಮುಂಡಿ ಬೆಟ್ಟದ ತಪ್ಪಲಿನಲ್ಲಿ ಸಕಲ ಸರ್ಕಾರ ಗೌರವಗಳೊಂದಿಗೆ ಅಂತ್ಯಕ್ರಿಯೆ ನಡೆಯಲಿದೆ.

<><><><>

ಸೇವೆ ಮತ್ತು ಸುಶಾಸನ ಮಂತ್ರದಿಂದ ಅಂದರೆ ಸಾರ್ವಜನಿಕ ಸೇವೆ ಮತ್ತು ಉತ್ತಮ ಆಡಳಿತದ ಮಾರ್ಗದರ್ಶನದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ, ಪರಿವರ್ತನೆ ಮತ್ತು ಪ್ರಗತಿಯನ್ನು ತರಲು ಅವಿಶ್ರಾಂತವಾಗಿ ಶ್ರಮಿಸುತ್ತಿದೆ. ಇಂದು ಈ ವಿಶೇಷ ಸರಣಿ - 'ಸೇವಾ ಪರ್ವ್'ದಲ್ಲಿ ಕೇಂದ್ರ ಸರ್ಕಾರ ರಕ್ಷಣಾ ಉತ್ಪಾದನೆಯನ್ನು ಹೇಗೆ ಬಲಪಡಿಸಿದೆ, ಭಾರತವನ್ನು ಸ್ವಾವಲಂಬಿಯನ್ನಾಗಿ ಮತ್ತು ಜಾಗತಿಕ ರಕ್ಷಣಾ ಮಾರುಕಟ್ಟೆಯಲ್ಲಿ ಉದಯೋನ್ಮುಖ ಶಕ್ತಿಯಾಗಿ ಮಾಡಿದೆ ಎಂಬುದರ ಕುರಿತು ವಿಶೇಷ ವರದಿ ಇದೀಗ ಮೂಡಿಬರಲಿದೆ.

ಧ್ವನಿ: ವಿಶೇಷ ವರದಿ

ರಕ್ಷಣಾ ಉತ್ಪಾದನೆಯಲ್ಲಿ ಸ್ವಾವಲಂಬನೆಯು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ ಪ್ರಮುಖ ಆದ್ಯತೆಗಳಲ್ಲಿ ಒಂದಾಗಿದೆ. ಆಪರೇಷನ್ ಸಿಂದೂರ್ ಸಮಯದಲ್ಲಿ ಮೇಡ್ ಇನ್ ಇಂಡಿಯಾದ ಪರಾಕ್ರಮವನ್ನು ಪ್ರದರ್ಶಿಸಲಾಯಿತು. ಪ್ರಧಾನಿ ಮೋದಿ ಅವರ ಅಧಿಕಾರಾವಧಿಯಲ್ಲಿ, ವಾರ್ಷಿಕ ರಕ್ಷಣಾ ಉತ್ಪಾದನೆಯು ೨೦೨೪-೨೫ರಲ್ಲಿ ಒಂದು ಲಕ್ಷ ೫೦ ಸಾವಿರ ಕೋಟಿ ರೂಪಾಯಿಗಳಿಗೂ ಹೆಚ್ಚು ಸಾರ್ವಕಾಲಿಕ ಗರಿಷ್ಠ ಮಟ್ಟಕ್ಕೆ ಏರಿಕೆಯಾಗಿದೆ. ಇದು ೨೦೧೪-೧೫ಕ್ಕೆ ಹೋಲಿಸಿದರೆ, ಮೂರು ಪಟ್ಟು ಹೆಚ್ಚಾಗಿದೆ.

ಮೇಕ್-ಇನ್-ಇಂಡಿಯಾ ಭಾರತದ ರಾಷ್ಟ್ರೀಯ ಭದ್ರತೆಯಲ್ಲಿ ಅತ್ಯಗತ್ಯ ಅಂಶವಾಗಿದೆ. ಇದು ಆಪರೇಷನ್ ಸಿಂದೂರ್ ಸಮಯದಲ್ಲಿ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಭಾರತದಲ್ಲಿ ಭಯೋತ್ಪಾದನೆಯ ವಿರುದ್ಧ ಭಾರತದ ಪರಿಣಾಮಕಾರಿ ಕ್ರಮದಲ್ಲಿ ಪ್ರಮುಖ ಪಾತ್ರ ವಹಿಸಿದೆ. ಕಾರ್ಯತಂತ್ರದ ನೀತಿಗಳು ಮತ್ತು ಸ್ಥಳೀಯ ನಾವೀನ್ಯತೆಗಳಿಂದಾಗಿ, ರಕ್ಷಣಾ ಉತ್ಪಾದನೆಯಲ್ಲಿ ಭಾರತದ ಬೆಳೆಯುತ್ತಿರುವ ಸ್ವಾವಲಂಬನೆಯು ರಾಷ್ಟ್ರೀಯ ಭದ್ರತೆ ಮತ್ತು ಜಾಗತಿಕತೆಯನ್ನು ಹೆಚ್ಚಿಸಿದೆ. ಹೆಚ್ಚುತ್ತಿರುವ ರಫ್ತು ಮತ್ತು ಮೇಕ್ ಇನ್ ಇಂಡಿಯಾದಂತಹ ಉಪಕ್ರಮಗಳು ಅಂತಾರಾಷ್ಟ್ರೀಯ ರಕ್ಷಣಾ ಮಾರುಕಟ್ಟೆಯಲ್ಲಿ ಪ್ರಮುಖ ಪಾತ್ರ ವಹಿಸುವ ದೇಶದ ಬದ್ಧತೆಯನ್ನು ಪ್ರತಿಬಿಂಬಿಸುತ್ತವೆ.

<><><><>

ದುಬೈ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಏಷ್ಯಾ ಕಪ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ ಸೂಪರ್-೪ ಹಂತದ ಪಂದ್ಯದಲ್ಲಿ ಬಾಂಗ್ಲಾದೇಶ ವಿರುದ್ಧ ಭಾರತ ೪೧ ರನ್‌ಗಳ ಭರ್ಜರಿ ಗೆಲುವು ದಾಖಲಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಭಾರತ, ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೧೬೮ ರನ್ ಗಳಿಸಿತು. ಭಾರತದ ಪರವಾಗಿ ಅಭಿಷೇಕ್ ಶರ್ಮಾ ೭೫, ಹಾರ್ದಿಕ್ ಪಾಂಡ್ಯ ೩೮ ರನ್ ಪೇರಿಸಿದರು. ಭಾರತ ನೀಡಿದ ಗುರಿಯನ್ನು ಬೆನ್ನತ್ತಿದ ಬಾಂಗ್ಲಾದೇಶ, ೧೯.೩ ಓವರ್‌ಗಳಲ್ಲಿ ೧೨೭ ರನ್‌ಗಳಿಗೆ ತನ್ನ ಎಲ್ಲಾ ವಿಕೆಟ್‌ಗಳನ್ನು ಕಳೆದುಕೊಂಡಿತು. ಭಾರತದ ಪರವಾಗಿ ಜಸ್ಪ್ರೀತ್ ಬೂಮ್ರಾ ೫ ವಿಕೆಟ್ ಮತ್ತು ಶಿವಂ ದುಬೆ ೩ ವಿಕೆಟ್ ಕಬಳಿಸಿ ತಂಡದ ಗೆಲುವಿಗೆ ಪ್ರಮುಖ ಪಾತ್ರ ವಹಿಸಿದರು. ಅಭಿಷೇಕ್ ಶರ್ಮಾ ಪಂದ್ಯ ಶ್ರೇಷ್ಠ ಗೌರವಕ್ಕೆ ಪಾತ್ರರಾದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>